All India Radio: Bangalore
National Bulletin In Kannada
27.11.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

1. ಭಾರತೀಯ ಬಾಹ್ಯಾಕಾಶ ನವೋದ್ಯಮ ಸ್ಕೈರೂಟ್‌ನ ಇನ್ಫಿನಿಟಿ ಕ್ಯಾಂಪಸ್‌ಗೆ ಇಂದು ಪ್ರಧಾನಿ ನರೇಂದ್ರ ಮೋದಿ ಚಾಲನೆ
2. ಭಾರತಕ್ಕೆ ೨೦೩೦ರ ಕಾಮನ್‌ವೆಲ್ತ್ ಕ್ರೀಡಾಕೂಟದ ಆತಿಥ್ಯ ; ಅಹಮದಾಬಾದ್‌ನಲ್ಲಿ ಕ್ರೀಡಾಕೂಟ ಆಯೋಜನೆ
3. ಇಂಡೋನೇಷಿಯಾ ರಕ್ಷಣಾ ಸಚಿವರೊಂದಿಗೆ ಸಚಿವ ರಾಜನಾಥ್ ಸಿಂಗ್ ಇಂದು ದ್ವಿಪಕ್ಷೀಯ ಮಾತುಕತೆ
4. ರಾಮಮಂದಿರದಲ್ಲಿ ಧ್ವಜಾರೋಹಣ ಕುರಿತು ಪಾಕಿಸ್ತಾನದ ಹೇಳಿಕೆಗೆ ಭಾರತ ತೀವ್ರ ಆಕ್ಷೇಪ

<><><><>

ಪ್ರಧಾನಿ ನರೇಂದ್ರ ಮೋದಿ ಇಂದು ಬೆಳಗ್ಗೆ ೧೧ ಗಂಟೆಗೆ ವೀಡಿಯೊ ಕಾನ್ಫರೆನ್ಸಿಂಗ್ ಮೂಲಕ ಭಾರತೀಯ ಬಾಹ್ಯಾಕಾಶ ನವೋದ್ಯಮ ಸ್ಕೈರೂಟ್‌ನ ಇನ್ಫಿನಿಟಿ ಕ್ಯಾಂಪಸ್ ಅನ್ನು ಉದ್ಘಾಟಿಸಲಿದ್ದಾರೆ. ಅವರು ಸ್ಕೈರೂಟ್‌ನ ಮೊದಲ ಕಕ್ಷೀಯ ರಾಕೆಟ್, ವಿಕ್ರಮ್-೧ ಅನ್ನು ಅನಾವರಣಗೊಳಿಸಲಿದ್ದಾರೆ. ಇದು ಉಪಗ್ರಹಗಳನ್ನು ಕಕ್ಷೆಗೆ ಉಡಾಯಿಸುವ ಸಾಮರ್ಥ್ಯವನ್ನು ಹೊಂದಿದೆ. ಅತ್ಯಾಧುನಿಕ ಸೌಲಭ್ಯವು ಪ್ರತಿ ತಿಂಗಳು ಒಂದು ರಾಕೆಟ್ ಅನ್ನು ನಿರ್ಮಿಸುವ ಸಾಮರ್ಥ್ಯದೊಂದಿಗೆ ಬಹು ಉಡಾವಣಾ ವಾಹನಗಳನ್ನು ವಿನ್ಯಾಸಗೊಳಿಸಲು, ಅಭಿವೃದ್ಧಿಪಡಿಸಲು, ಸಂಯೋಜಿಸಲು ಮತ್ತು ಪರೀಕ್ಷಿಸಲು ಸುಮಾರು ೨ ಲಕ್ಷ ಚದರ ಅಡಿ ಕಾರ್ಯಕ್ಷೇತ್ರವನ್ನು ಹೊಂದಿರುತ್ತದೆ. ಸ್ಕೈರೂಟ್-ಭಾರತದ ಪ್ರಮುಖ ಖಾಸಗಿ ಬಾಹ್ಯಾಕಾಶ ಕಂಪನಿಯಾಗಿದ್ದು, ಇದನ್ನು ಪವನ್ ಚಂದನ ಮತ್ತು ಭರತ್ ಢಾಕಾ ಸ್ಥಾಪಿಸಿದ್ದಾರೆ. ಇಬ್ಬರೂ ಭಾರತೀಯ ತಂತ್ರಜ್ಞಾನ ಸಂಸ್ಥೆಯ ಹಳೆಯ ವಿದ್ಯಾರ್ಥಿಗಳು ಮತ್ತು ಇಸ್ರೋದ ಮಾಜಿ ವಿಜ್ಞಾನಿಗಳಾಗಿದ್ದಾರೆ.

<><><><>

ಒಡಿಶಾ ವಿಧಾನಸಭೆಯ ಚಳಿಗಾಲದ ಅಧಿವೇಶನ ಇಂದಿನಿಂದ ಆರಂಭವಾಗಲಿದ್ದು, ಮೊದಲ ದಿನವಾದ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅಧಿವೇಶನ ಉದ್ದೇಶಿಸಿ ಮಾತನಾಡಲಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಒಡಿಶಾ ವಿಧಾನಸಭೆಯಲ್ಲಿ ಶಾಸಕರಾಗಿ ತಮ್ಮ ರಾಜಕೀಯ ಜೀವನ ಆರಂಭಿಸಿದ್ದರು. ಈ ಭೇಟಿ ವೇಳೆ ಅವರು ತಾವು ಕಾರ್ಯನಿರ್ವಹಣೆ ಮಾಡುತ್ತಿದ್ದ ಕೊಠಡಿಗೂ ತೆರಳಿ ವೀಕ್ಷಣೆ ಮಾಡಲಿದ್ದಾರೆ. ಇದೇ ಮೊದಲ ಬಾರಿಗೆ, ಒಡಿಶಾ ವಿಧಾನಸಭೆಯ ಅಧಿವೇಶನವನ್ನು ಉದ್ದೇಶಿಸಿ ದೇಶದ ರಾಷ್ಟ್ರಪತಿಯೊಬ್ಬರು ಮಾತನಾಡುತ್ತಿರುವುದು ವಿಶೇಷವಾಗಿದೆ.

<><><><>

೨೦೩೦ ರ ಕಾಮನ್ವೆಲ್ತ್ ಕ್ರೀಡಾಕೂಟದ ಆತಿಥ್ಯದ ಹಕ್ಕುಗಳನ್ನು ಅಹಮದಾಬಾದ್‌ಗೆ ಔಪಚಾರಿಕವಾಗಿ ನೀಡಲಾಗಿದೆ. ಬ್ರಿಟನ್‌ನ ಗ್ಲಾಸ್ಗೋದಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ೭೪ ಕಾಮನ್‌ವೆಲ್ತ್ ರಾಷ್ಟ್ರಗಳ ಪ್ರತಿನಿಧಿಗಳು ಈ ನಿರ್ಧಾರವನ್ನು ಅನುಮೋದಿಸಿದ್ದಾರೆ. ೨೦೧೦ ರಲ್ಲಿ ನವದೆಹಲಿಯಲ್ಲಿ ಈ ಕ್ರೀಡಾಕೂಟವನ್ನು ಆಯೋಜಿಸಲಾಗಿತ್ತು. ೨೦೩೬ ರಲ್ಲಿ ಒಲಿಂಪಿಕ್ ಆತಿಥ್ಯ ವಹಿಸುವ ಭಾರತದ ಮಹತ್ವಾಕಾಂಕ್ಷೆಯನ್ನು ಈ ನಿರ್ಧಾರವು ಬಲಪಡಿಸಿದೆ. ೨೦೩೦ರ ಕಾಮನ್‌ವೆಲ್ತ್ ಕ್ರೀಡಾಕೂಟದ ಆತಿಥ್ಯದ ಹಕ್ಕುಗಳನ್ನು ಅಹಮದಾಬಾದ್‌ಗೆ ನೀಡುವ ಕಾಮನ್‌ವೆಲ್ತ್ ಕ್ರೀಡಾಕೂಟದ ನಿರ್ಧಾರವು ೨೦೪೭ರ ವೇಳೆಗೆ ಕ್ರೀಡಾ ಶಕ್ತಿ ಕೇಂದ್ರವಾಗಲು ಶ್ರಮಿಸುತ್ತಿರುವ ಭಾರತಕ್ಕೆ ಪ್ರತಿಷ್ಠಿತ ಕ್ಷಣವಾಗಿದೆ ಎಂದು ಕೇಂದ್ರ ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ ಹೇಳಿದ್ದಾರೆ. ಅಹಮದಾಬಾದ್‌ನಲ್ಲಿ ೨೦೩೦ರ ಕಾಮನ್‌ವೆಲ್ತ್ ಕ್ರೀಡಾಕೂಟವನ್ನು ಆಯೋಜಿಸುವ ಬಿಡ್ ಅನ್ನು ಭಾರತ ಗೆದ್ದಿರುವುದಕ್ಕೆ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹರ್ಷ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಉಪರಾಷ್ಟ್ರಪತಿಯವರು, ಈ ಮಹತ್ವದ ಬೆಳವಣಿಗೆಯು ದೇಶದ ಕ್ರೀಡಾ ಪರಿಸರ ವ್ಯವಸ್ಥೆಯ ಸಾಮೂಹಿಕ ಶಕ್ತಿ, ಪ್ರತಿಭೆ ಮತ್ತು ಚೈತನ್ಯವನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ. ಜಾಗತಿಕ ಕ್ರೀಡೆಗಳಲ್ಲಿ ದೇಶದ ಬೆಳೆಯುತ್ತಿರುವ ಸ್ಥಾನಮಾನ ಮತ್ತು ದೇಶದ ಕ್ರೀಡಾಪಟುಗಳು, ತರಬೇತುದಾರರು ಮತ್ತು ಆಡಳಿತಗಾರರ ಅಚಲ ಸಮರ್ಪಣೆಗೆ ಇದು ಸಾಕ್ಷಿಯಾಗಿದೆ. ಕಾಮನ್‌ವೆಲ್ತ್ ಕ್ರೀಡಾಕೂಟವನ್ನು ಆಯೋಜಿಸುವುದು ಭಾರತದ ಸಾಮರ್ಥ್ಯ, ಏಕತೆ ಮತ್ತು ಆಕಾಂಕ್ಷೆಗಳನ್ನು ವಿಶ್ವ ವೇದಿಕೆಯಲ್ಲಿ

ಪ್ರದರ್ಶಿಸಲು ಒಂದು ಐತಿಹಾಸಿಕ ಅವಕಾಶವನ್ನು ನೀಡುತ್ತದೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅಭಿಪ್ರಾಯಪಟ್ಟಿದ್ದಾರೆ.

<><><>

ಪುಣೆ ಮೆಟ್ರೋ ರೈಲು ಯೋಜನೆ ಹಂತ-೨ಕ್ಕೆ ಹಾಗೂ ಅಪರೂಪದ ಖನಿಜಗಳ ಶಾಶ್ವತ ಆಯಸ್ಕಾಂತ ನಿರ್ಮಾಣ ಯೋಜನೆಗೆ ಸಚಿವ ಸಂಪುಟ ಅನುಮೋದನೆ ನೀಡಿದೆ. ಸಂಪುಟ ಸಭೆಯ ನಂತರ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ಅಪರೂಪದ ಖನಿಜಗಳನ್ನು ಬಳಸಿ ಶಾಶ್ವತ ಆಯಸ್ಕಾಂತಗಳನ್ನು ದೇಶದಲ್ಲೇ ನಿರ್ಮಿಸಲು ಉದ್ದೇಶಿಸಲಾಗಿದ್ದು, ೭ ಸಾವಿರದ ೨೮೦ ಕೋಟಿ ರೂಪಾಯಿ ವೆಚ್ಚದ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು. ರಕ್ಷಣಾ ಸಲಕರಣೆಗಳು, ವೈದ್ಯಕೀಯ ಉಪಕರಣಗಳು ಸೇರಿದಂತೆ ವೈಮಾನಿಕ ಸಾಧನಗಳ ತಯಾರಿಕೆಯಲ್ಲಿ ಆಯಸ್ಕಾಂತಗಳ ಉಪಯೋಗ ಅಧಿಕವಾಗಿದೆ. ಶಾಶ್ವತ ಆಯಸ್ಕಾಂತಗಳ ಬೇಡಿಕೆ ದೇಶದಲ್ಲಿ ನಿರಂತರವಾಗಿ ಹೆಚ್ಚುತ್ತಿದ್ದು, ಸಂಪೂರ್ಣ ಕೇಂದ್ರೀಕೃತ ವ್ಯವಸ್ಥೆಯನ್ನು ನಿರ್ಮಿಸಲಾಗುವುದು ಎಂದು ಅವರು ಹೇಳಿದ್ದಾರೆ.

ಧ್ವನಿ : ಅಶ್ವಿನಿ ವೈಷ್ಣವ್ (೨೨ ಸೆಕೆಂಡ್‌ಗಳು)

ಪುಣೆ ಮೆಟ್ರೋ ರೈಲು ಯೋಜನೆಯ ಹಂತ-೨ ರ ಅಡಿಯಲ್ಲಿ ಸರ್ಕಾರ ಲೈನ್ ೪ ಖರಡಿ-ಹಡಪ್ಸರ್-ಸ್ವರ್ಗೇಟ್-ಖಡಕ್ವಾಸ್ಲಾ ಮತ್ತು ಲೈನ್ ೪ಎ - ನಾಲ್ ಸ್ಟಾಪ್-ವರ್ಜೆ-ಮಾಣಿಕ್ ಬಾಗ್ ಯೋಜನೆ ಸುಮಾರು ೯ ಸಾವಿರದ ೮೫೭ ಕೋಟಿ ರೂಪಾಯಿಗಳ ಅಂದಾಜು ವೆಚ್ಚದಲ್ಲಿ ಐದು ವರ್ಷಗಳಲ್ಲಿ ಪೂರ್ಣಗೊಳ್ಳಲಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

<><><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಇಂದು ನವದೆಹಲಿಯಲ್ಲಿ ಇಂಡೋನೇಷ್ಯಾ ರಕ್ಷಣಾ ಸಚಿವ ಸ್ಜಾಫ್ರಿ ಸ್ಜಾಮ್‌ಸಿದ್ದೀನ್ ಅವರೊಂದಿಗೆ ಮೂರನೇ ಭಾರತ-ಇಂಡೋನೇಷ್ಯಾ ರಕ್ಷಣಾ ಸಚಿವರ ಸಂವಾದದ ಸಹ-ಅಧ್ಯಕ್ಷತೆ ವಹಿಸಲಿದ್ದಾರೆ. ಉಭಯ ನಾಯಕರು ಪ್ರಾದೇಶಿಕ ಭದ್ರತಾ ಬೆಳವಣಿಗೆಗಳನ್ನು ಪರಿಶೀಲಿಸುತ್ತಾರೆ, ಬಹುಪಕ್ಷೀಯ ವಿಷಯಗಳ ಬಗ್ಗೆ ಚರ್ಚಿಸುತ್ತಾರೆ ಮತ್ತು ದ್ವಿಪಕ್ಷೀಯ ರಕ್ಷಣಾ ಸಹಕಾರವನ್ನು ಬಲಪಡಿಸುವ ನಿಟ್ಟಿನಲ್ಲಿ ಹೊಸ ಕ್ಷೇತ್ರಗಳನ್ನು ಅನ್ವೇಷಿಸುತ್ತಾರೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಇಂಡೋನೇಷ್ಯಾ ಸಚಿವರು ಎರಡು ದಿನಗಳ ಭಾರತ

ಭೇಟಿಯಲ್ಲಿದ್ದಾರೆ. ಈ ಭೇಟಿಯು ಭಾರತ-ಇಂಡೋನೇಷ್ಯಾ ರಕ್ಷಣಾ ಸಂಬಂಧಗಳಿಗೆ ನೀಡುವ ಕಾರ್ಯತಂತ್ರದ ಮಹತ್ವವನ್ನು ಮತ್ತಷ್ಟು ಬಲಪಡಿಸುತ್ತದೆ.

<><><>

ರಾಮ ಮಂದಿರದಲ್ಲಿ ಧ್ವಜಾರೋಹಣ ಸಮಾರಂಭದ ಕುರಿತು ಪಾಕಿಸ್ತಾನ ಇತ್ತೀಚೆಗೆ ನೀಡಿದ ಹೇಳಿಕೆಗಳಿಗೆ ಭಾರತ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದು, ಪಾಕಿಸ್ತಾನಕ್ಕೆ ಇತರರಿಗೆ ಉಪನ್ಯಾಸ ನೀಡುವ ನೈತಿಕ ಹಕ್ಕಿಲ್ಲ ಎಂದು ಹೇಳಿದೆ. ಈ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಪಾಕಿಸ್ತಾನವು ತನ್ನ ದೃಷ್ಟಿಯನ್ನು ಒಳಮುಖವಾಗಿ ತಿರುಗಿಸಿ, ತನ್ನದೇ ಆದ ಮಾನವ ಹಕ್ಕುಗಳ ರಕ್ಷಣೆ ಮೇಲೆ ಕೇಂದ್ರೀಕರಿಸಬೇಕು ಎಂದು ಆಗ್ರಹಿಸಿದರು. ಚೀನಾದ ಕುರಿತಾದ ಪ್ರಶ್ನೆಗೆ ಪ್ರತಿಕ್ರಿಯಿಸಿದ ವಕ್ತಾರರು, ಅರುಣಾಚಲ ಪ್ರದೇಶವು ಭಾರತದ ಅವಿಭಾಜ್ಯ ಮತ್ತು ಬೇರ್ಪಡಿಸಲಾಗದ ಭಾಗವಾಗಿದೆ ಹಾಗೂ ಚೀನಾದ ಕಡೆಯಿಂದ ಯಾವುದೇ ನಿರಾಕರಣೆ ಬಂದರೂ ಈ ನಿರ್ವಿವಾದದ ವಾಸ್ತವವನ್ನು ಬದಲಾಯಿಸಲು ಸಾಧ್ಯವಿಲ್ಲ. ಕಳೆದ ವರ್ಷ ಅಕ್ಟೋಬರ್‌ನಿಂದ ಭಾರತ-ಚೀನಾ ಗಡಿ ಪ್ರದೇಶಗಳಲ್ಲಿ ಶಾಂತಿಯನ್ನು ಕಾಪಾಡಿಕೊಳ್ಳಲು ನಿಕಟವಾಗಿ ಕೆಲಸ ಮಾಡುತ್ತಿದೆ ಎಂದು ಹೇಳಿದ್ದಾರೆ. ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ಹಸ್ತಾಂತರದ ಕೋರಿಕೆಯ ಕುರಿತು, ಮನವಿಯನ್ನು ಸ್ವೀಕರಿಸಲಾಗಿದೆ. ನ್ಯಾಯಾಂಗ ಮತ್ತು ಆಂತರಿಕ ಕಾನೂನು ಪ್ರಕ್ರಿಯೆಗಳ ಭಾಗವಾಗಿ ಅದನ್ನು ಪರಿಶೀಲಿಸಲಾಗುತ್ತಿದೆ ಎಂದು ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ.

<><><>

ಭಾರತೀಯ ಗ್ರಾಹಕ ಮತ್ತು ಕೈಗಾರಿಕಾ ಬ್ರ್ಯಾಂಡ್‌ಗಳು ಜಾಗತಿಕ ಮಾರುಕಟ್ಟೆಗಳಿಗೆ ಬೆಂಬಲ ನೀಡಲು, ದುಬೈ ಅನ್ನು ಅವುಗಳ ಅಂತಾರಾಷ್ಟ್ರೀಯ ಬೆಳವಣಿಗೆಗೆ ಕೇಂದ್ರವಾಗಿ ಇರಿಸಲು ಇಂಡಿಯಾ ಗ್ಲೋಬಲ್ ಫೋರಮ್, ೧೫೦ ದಶಲಕ್ಷ ಅಮೆರಿಕನ್ ಡಾಲರ್ ನಿಧಿಯನ್ನು ಪ್ರಾರಂಭಿಸಿದೆ. ಈ ಕುರಿತು ಮಾಹಿತಿ ನೀಡಿದ ಐಜಿಎಫ್ ಅಧ್ಯಕ್ಷ ಮನೋಜ್ ಲಾಡ್ವಾ, ಈ ಉಪಕ್ರಮವು 'ಭಾರತ-ಯುಎಇ ಸಹಯೋಗದ ಹೊಸ ಯುಗವಾಗಿದೆ, ದುಬೈನ ಸಂಪರ್ಕ ಮತ್ತು ಐಜಿಎಫ್‌ನ ಜಾಲತಾಣ, ಭಾರತೀಯ ಕಂಪನಿಗಳು ಮಧ್ಯಪ್ರಾಚ್ಯ, ಆಫ್ರಿಕಾ, ಯುರೋಪ್ ಮತ್ತು ಅದರಾಚೆಗೆ ವಿಸ್ತರಿಸಲು ಸಹಾಯ ಮಾಡುತ್ತದೆ ಎಂದು ಹೇಳಿದ್ದಾರೆ.

ನಿಧಿ ಮತ್ತು ವೇಗವರ್ಧಕವು, ಆಹಾರ ಮತ್ತು ಪಾನೀಯ, ಗ್ರಾಹಕ ಉತ್ಪನ್ನಗಳು, ರಾಸಾಯನಿಕಗಳು, ಆಟೋಮೋಟಿವ್, ಉತ್ಪಾದನೆ ಮತ್ತು ಕೈಗಾರಿಕಾ ಸರಕುಗಳಂತಹ ಕ್ಷೇತ್ರಗಳಲ್ಲಿ ಭಾರತೀಯ ಕಂಪನಿಗಳ ಹೆಚ್ಚಿನ ಬೆಳವಣಿಗೆಗೆ ಸಹಕಾರಿಯಾಗಿದೆ. ಯುಎಇಗೆ ಭಾರತದ ರಾಯಭಾರಿ ಡಾ. ದೀಪಕ್ ಮಿತ್ತಲ್ ಮಾತನಾಡಿ, ಅನಿಶ್ಚಿತ ಜಾಗತಿಕ ಪರಿಸರವನ್ನು ನಿಭಾಯಿಸಲು ಭಾರತ ಮತ್ತು ಯುಎಇ ಉತ್ತಮ ಸ್ಥಾನದಲ್ಲಿವೆ. ಪ್ರಧಾನಿ ನರೇಂದ್ರ ಮೋದಿಯವರ ೨೦೧೫ ರ ಯುಎಇ ಭೇಟಿಯು ತಂತ್ರಜ್ಞಾನ, ಶಿಕ್ಷಣ ಮತ್ತು ಹೂಡಿಕೆಯಾದ್ಯಂತ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆ, ಸಿಇಪಿಎ ಮತ್ತು ಸಹಕಾರವನ್ನು ವೇಗಗೊಳಿಸಿದೆ ಎಂದು ಹೇಳಿದ್ದಾರೆ.

<><><>

ಸಂವಿಧಾನ ದಿನದಂದು ಪ್ಯಾರಿಸ್‌ನ ಯುನೆಸ್ಕೋ ಪ್ರಧಾನ ಕಚೇರಿಯಲ್ಲಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಪ್ರತಿಮೆ ಅನಾವರಣಗೊಂಡಿದ್ದಕ್ಕೆ ಪ್ರಧಾನಿ ನರೇಂದ್ರ ಮೋದಿ ಹೆಮ್ಮೆ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿಯವರು, ಇದು ಡಾ. ಅಂಬೇಡ್ಕರ್ ಮತ್ತು ಸಂವಿಧಾನ ರಚನೆಯಲ್ಲಿ ಅವರ ಪಾತ್ರಕ್ಕೆ ಸೂಕ್ತವಾದ ಗೌರವ. ಡಾ. ಅಂಬೇಡ್ಕರ್ ಅವರ ಆಲೋಚನೆಗಳು ಮತ್ತು ಆದರ್ಶಗಳು ಅಸಂಖ್ಯಾತ ಜನರಿಗೆ ಶಕ್ತಿ ಮತ್ತು ಭರವಸೆಯನ್ನು ನೀಡುತ್ತವೆ ಎಂದು ಹೇಳಿದರು.

<><><>

ರೊಮೇನಿಯಾದಲ್ಲಿ ನಡೆದ ಐಟಿಟಿಎಫ್ ವಿಶ್ವ ಯುವ ಚಾಂಪಿಯನ್‌ಶಿಪ್‌ನಲ್ಲಿ ಭಾರತೀಯ ಟೇಬಲ್ ಟೆನಿಸ್ ಆಟಗಾರರು ಪ್ರಬಲ ಪ್ರದರ್ಶನ ನೀಡಿದ್ದು, ಒಂದು ಬೆಳ್ಳಿ ಮತ್ತು ಒಂದು ಕಂಚು ಪದಕಗಳನ್ನು ಗೆದ್ದಿದ್ದಾರೆ. ೧೯ ವ?ದೊಳಗಿನ ಬಾಲಕರ ತಂಡವು ಅತ್ಯುತ್ತಮ ಪ್ರದರ್ಶನದ ನಡುವೆ ಫೈನಲ್‌ನಲ್ಲಿ ಜಪಾನ್ ವಿರುದ್ಧ ೦-೩ ಅಂತರದಿಂದ ಸೋಲನುಭವಿಸಿತು. ಇದಕ್ಕೂ ಮೊದಲು, ಸೆಮಿಫೈನಲ್‌ನಲ್ಲಿ ಚೈನೀಸ್ ತೈಪೆ ವಿರುದ್ಧ ೩-೨ ಅಂತರದ ರೋಮಾಂಚಕ ಜಯದೊಂದಿಗೆ ಭಾರತ, ಫೈನಲ್ ಪ್ರವೇಶಿಸಿತ್ತು. ೧೫ ವ?ದೊಳಗಿನ ಬಾಲಕಿಯರ ತಂಡವು ಸೆಮಿಫೈನಲ್ ತಲುಪಿ ಕಂಚಿನ ಪದಕ ಗೆಲ್ಲುವ ಮೂಲಕ ಭಾರತಕ್ಕೆ ಪದಕ ತಂದುಕೊಟ್ಟಿತು. ೧೯ ವ?ದೊಳಗಿನ ಬಾಲಕಿಯರ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿ ಭಾರತ ತಂಡವು ಚೈನೀಸ್ ತೈಪೆ ವಿರುದ್ಧ ೨-೩ ಅಂತರದಿಂದ ಸೋಲನುಭವಿಸಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>